**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತೈದನೆಯ ಅಧಿವೇಶನ**

# ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–07)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016 (2016ರ ಕರ್ನಾಟಕ ಅಧಿನಿಯಮ 16)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೆ ಜಾರಿಗೆ ಬರತಕ್ಕದ್ದು.

**2. ಪದಾವಳಿಯ ಪ್ರತಿಯೋಜನೆ.-** ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016 (2016ರ ಕರ್ನಾಟಕ ಅಧಿನಿಯಮ 16)ರಲ್ಲಿ "ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ" ಎಂಬ ಪದಗಳು ಬರುವ ಕಡೆಗಳಲ್ಲೆಲ್ಲಾ "ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ
**(ವಿಧೇಯಕವನ್ನು ಮಂಡಿಸಿದಾಗ ಲಗತ್ತಿಸಿದಂತೆ)**

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯವನ್ನು "ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ" ಎಂದು ಮರುನಾಮಕರಣ ಮಾಡಲು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಅಧಿನಿಯಮ, 2016 (2016ರ ಕರ್ನಾಟಕ ಅಧಿನಿಯಮ 16)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

# ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಪ್ರಿಯಾಂಕ್ ಖರ್ಗೆ**
ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ
ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಕಾಸೂ 906, ಪ್ರತಿಗಳು 300, 14ನೇ ಮಾರ್ಚ್ 2025

KARNATAKA LEGISLATIVE COUNCIL

ONE HUNDRED AND FIFTY FIFTH SESSION

# THE KARNATAKA STATE RURAL DEVELOPMENT AND PANCHAYAT RAJ UNIVERSITY (AMENDMENT) BILL, 2025

**(LA Bill No. 07 of 2025)**

**(As passed by the Karnataka Legislative Assembly)**

A Bill further to amend the Karnataka State Rural Development and Panchayat Raj University Act, 2016.

Whereas, it is expedient further to amend the Karnataka State Rural Development and Panchayat Raj University Act, 2016 (Karnataka Act 16 of 2016) for the purposes hereinafter appearing;

Be it enacted by the Karnataka State Legislature in the Seventy sixth year of the Republic of India, as follows:-

**1. Short title and commencement.-**(1) This Act may be called the Karnataka State Rural Development and Panchayat Raj University (Amendment) Act, 2025.

(2) It shall come into force at once.

**2. Substitution of expression.-**In the Karnataka State Rural Development and Panchayat Raj University Act, 2016 (Karnataka Act 16 of 2016) for the words, “the Karnataka State Rural Development and Panchayat Raj University”, wherever they occur, the words “the Mahatma Gandhi Rural Development and Panchayat Raj University”, shall be substituted.

## STATEMENT OF OBJECTS AND REASONS

**(As appended to at the time of Introduction)**

It is considered necessary to amend the Karnataka State Rural Development and Panchayat Raj University Act, 2016 (Karnataka Act 16 of 2016) to change nomenclature of “the Karnataka State Rural Development and Panchayat Raj University” as “the Mahatma Gandhi Rural Development and Panchayat Raj University”.

Hence the Bill.

## FINANCIAL MEMORANDUM

There is no extra expenditure involved in the proposed legislative measure.

**PRIYANK KHARGE**
Minister for Rural Development and
Panchayat Raj and Informantion Technology
and Bio Technology

**K.R. MAHALAKSHMI**
Secretary
Karnataka Legislative Council

Govt. Press, Vikasa Soudha, Bengalur, 14th Mar, 2025, P7, W.D.906, Copies 300